ಮಂಗಳೂರಿನಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು

1387(1410); ಶ್ರೀ ಲೋಬೋ ಜೆ.ಆರ್

ಅ) ಮಂಗಳೂರಿನಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿಗೆ ಬೇಡಿಕೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಮಂಗಳೂರಿನ ಸರ್ಕಾರಿ ಪಾಲಿಟೆಕ್ನಿಕ್ ಆವರಣದಲ್ಲಿ ಸರ್ಕಾರಿ ಇಂಜಿನಿಯರಿಂಗ್ ಕಾಲೇಜನ್ನು ಆರಂಭ ಮಾಡಲು ಸರ್ಕಾರ ಚಿಂತನೆ ನಡೆಸಿದೆಯೇ?

ಶ್ರೀ ಆರ್.ವಿ. ದೇಶಪಾಂಡೆ (ಮಾನ್ಯ ಉನ್ನತ ಶಿಕ್ಷಣ ಸಚಿವರು)

ಅ) ಬಂದಿದೆ

ಆ) ಅನುದಾನದ ಲಭ್ಯತೆ, ಅಗತ್ಯತೆಗನುಗುಣವಾಗಿ ಹೊಸ ಪಾಲಿಟೆಕ್ನಿಕ್ ಕಾಲೇಜು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದೆ ಎ.ಐ.ಸಿ.ಟಿ.ಇ ಅನುಮತಿ ಅನುಸಾರ ಹೊಸ ಸರ್ಕಾರಿ ಇಂಜಿನಿಯರಿಂಗ್ ಕಾಲೇಜು ಪ್ರಾರಂಭಿಸಲು ಕ್ರಮ ವಹಿಸಲಾಗುವುದು.

ಡಿ.ಎಡ್. ಶಿಕ್ಷಣ ಸಂಸ್ಥೆಗಳು

1389(1412); ಶ್ರೀ ಲೋಬೋ ಜೆ.ಆರ್. (ಮಂಗಳೂರು ನಗರ ದಕ್ಷಿಣ)

ಅ) ರಾಜ್ಯದಲ್ಲಿ ಸರ್ಕಾರಿ ಡಿ.ಎಡ್, ತರಬೇತಿ ಶಿಕ್ಷಣ ಸಂಸ್ಥೆಗಳು ಯಾವುವು; ಕಳೆದ ಮೂರು ವರ್ಷಗಳಲ್ಲಿ ಈ ಸಂಸ್ಥೆಗಳಲ್ಲಿ ಲಭ್ಯವಿರುವ ಸೀಟುಗಳು ಎಷ್ಟು; ಈ ಪೈಕಿ ಭರ್ತಿಯಾಗಿರುವ ಸೀಟುಗಳು ಎಷ್ಟು;

ಆ) ಮಂಗಳೂರಿನಲ್ಲಿರುವ ಸರ್ಕಾರಿ ಗಂಡು ಮಕ್ಕಳ ಡಿ.ಎಡ್ ಸಂಸ್ಥೆ ಮತ್ತು ಹೆಣ್ಣು ಮಕ್ಕಳ ಡಿ.ಎಡ್, ಸಂಸ್ಥೆಗಳನ್ನು ವಿಲೀನಗೊಳಿಸಿ ಒಂದೇ ಸಂಸ್ಥೆಯನ್ನಾಗಿ ಮುಂದುವರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;